**<u>ದಿನಾಂಕ 13.11.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು .</u>**

**<u>ಮುಖ್ಯ ವಿಚಾರಣೆಃ 1ನೇ ಎದುರುದಾರರ ಪರ ಮಾನ್ಯ ವಕೀಲರಿಂದ.</u>**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ .

ಪಾಲಿಸಿಯ ಪ್ರತಿಯನ್ನು **ನಿ.ಆರ್ 1** ಎಂದು ಗುರುತಿಸಲಾಯಿತು.

ಪರ್ಮಿಟ್ ನ ನೆರಳಚ್ಚು ಪ್ರತಿಯನ್ನು ಹಾಜರುಪಡಿಸಿದ್ದು, ಅದು ನೆರಳಚ್ಚು ಪ್ರತಿಯಾದ ಕಾರಣ ಅದನ್ನು ನಿಶಾನೆಯನ್ನಾಗಿ ಗುರುತಿಸಿರುವುದಿಲ್ಲ.

**<u>ಪಾಟೀ ಸವಾಲುಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.</u>**

ಅಪಘಾತದ ಬಗ್ಗೆ ನನಗೆ ವಯಕ್ತಿಕ ಮಾಹಿತಿ ಇಲ್ಲ. ದಾಖಲಾತಿಗಳ ಆಧಾರದ ಮೇರೆಗೆ ಸಾಕ್ಷ್ಯ ನುಡಿಯುತ್ತಿದ್ದೇನೆ. ಆಪಾದಿತ ವಾಹನದ ಮಾಲೀಕರಿಗೆ ದಾಖಲಾತಿಗಳನ್ನು ಹಾಜರುಪಡಿಸುವಂತೆ ಕೋರಿ ನೋಟೀಸು ನೀಡಿರುತ್ತೇವೆ. ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ. ಆಪಾದಿತ ವಾಹನದ ಮಾಲೀಕರಿಗೆ ಯಾವುದೇ ನೋಟೀಸು ನೀಡಿಲ್ಲ ಎಂದರೆ ಸರಿಯಲ್ಲ. ಆಪಾದಿತ ವಾಹನದ ಮಾಲೀಕರು ನಿಗಧಿತ ಅವಧಿಯೊಳಗೆ ಪರ್ಮಿಟ್ ನವೀಕರಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಬಗ್ಗೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪರಿಹಾರ ಪಾವತಿಸುವ ಜವಾಬ್ದಾರಿಯಿಂದ ತಪ್ಪಿಸಿಕೊಳ್ಳುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ವಿಮೆ ನವೀಕರಿಸುವ ಸಂದರ್ಭದಲ್ಲಿ ಆರ್.ಸಿ ಮಾತ್ರ ಪರಿಶೀಲಿಸುತ್ತೇವೆ, ಇತರ ದಾಖಲಾತಿಗಳನ್ನು ಪರಿಶೀಲಿಸುವುದಿಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**
**(ಓ.ಹೇ.ಕೇ.ಸ.ಇ.)**

ಆರ್‌ಡಬ್ಲ್ಯೂ1 ಗಿರಿಶ್

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**